## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 443 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 18-02-2022 |
| 4) | ಉತ್ತರಿಸುವವರು | ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯದಲ್ಲಿ ನಿರುದ್ಯೋಗಿ ಪದವೀಧರರಿಗೆ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ; | **ಕೌಶಲ್ಯ ಮಿಷನ್**<br>ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದಿಂದ ರಾಜ್ಯದ ಎಲ್ಲಾ ಯುವಜನರಿಗೆ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ ಹಾಗೂ ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಯಡಿ ಜಾಬ್‌ರೋಲ್‌ಗಳಿಗೆ ಸಂಬಂಧಿಸಿದಂತೆ ಉಚಿತವಾಗಿ ಕೌಶಲ್ಯಾಧಾರಿತ ಅಲ್ಪಾವಧಿ ತರಬೇತಿಯನ್ನು ನೀಡಲಾಗುತ್ತಿದೆ. ತರಬೇತಿ ಪಡೆದ ಶೇ70%ರಷ್ಟು ಅಭ್ಯರ್ಥಿಗಳಿಗೆ ಉದ್ಯಮಶೀಲತೆ ಮತ್ತು ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದೆ. ಅಲ್ಲದೇ ನಿಗಮದ ವತಿಯಿಂದ ರಾಜ್ಯದ ಎಲ್ಲಾ ಯುವಜನರಿಗೆ ಉದ್ಯೋಗ ದೊರಕಿಸುವ ನಿಟ್ಟಿನಲ್ಲಿ ವರ್ಚುಯಲ್ ಜಾಬ್ ಮೇಳ ಹಾಗೂ ಜಿಲ್ಲೆಗಳಲ್ಲಿ ಜಿಲ್ಲಾ ಮಟ್ಟದ ಮಿನಿ ಉದ್ಯೋಗ ಮೇಳಗಳನ್ನು ಏರ್ಪಡಿಸಿ ಕೌಶಲ್ಯ ಸಂಪರ್ಕ (Skill Connect Portal) ಮುಖಾಂತರ ಅನ್ ಲೈನ್‌ನಲ್ಲಿ ನೋಂದಣಿಯಾದ ಉದ್ಯೋಗಕಾಂಕ್ಷಿಗಳನ್ನು ಹಾಗೂ ಉದ್ಯೋಗಧಾತರನ್ನು ಒಂದೆಡೆ ಸೇರಿಸಿ ಉದ್ಯೋಗ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದೆ.<br><br>**ಡೇ-ನಲ್ಮ್**<br>ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಡೇ-ನಲ್ಮ್ ಅಭಿಯಾನದಡಿ ನಿರುದ್ಯೋಗಿ ಪದವೀಧರರಿಗೆ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br><br>**1) ಸ್ವಯಂ ಉದ್ಯೋಗ ಕಾರ್ಯಕ್ರಮ:**<br>ಸದರಿ ಉಪಘಟಕದಡಿ ವೈಯಕ್ತಿಕ ಕಿರು ಉದ್ದಿಮೆ, ಗುಂಪು ಕಿರು ಉದ್ದಿಮೆ ಹಾಗೂ ಎಸ್‌ಹೆಚ್‌ಜಿ ಬ್ಯಾಂಕ್ ಕ್ರೆಡಿಟ್ ಲಿಂಕೇಜ್‌ಗೆ ಸಂಬಂಧಿಸಿದಂತೆ ಕ್ರಮವಾಗಿ ಬ್ಯಾಂಕಿನಿಂದ ರೂ.2.00, ರೂ.10.00 ಲಕ್ಷ ಮತ್ತು ರೂ.1.00 ಲಕ್ಷವರೆಗೆ ಬ್ಯಾಂಕಿನಿಂದ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಶೇ.7 ಕ್ಕಿಂತ ಮೇಲ್ಪಟ್ಟ ಬಡ್ಡಿ ಸಹಾಯಧನವನ್ನು ಯೋಜನೆಯಿಂದ ಭರಿಸಿ ಪಾವತಿಸಲಾಗುವುದು ಹಾಗೂ ಸ್ವ-ಸಹಾಯ ಸಂಘಗಳು ನಿಯಮಿತವಾಗಿ ಸಾಲವನ್ನು ಮರು ಪಾವತಿಸಿದರೆ ಶೇ.3 ರಷ್ಟು ಹೆಚ್ಚುವರಿ ಬಡ್ಡಿ ಸಹಾಯಧನ ನೀಡಲಾಗುವುದು ಹಾಗೂ ಉದ್ಯಮಶೀಲತಾ ತರಬೇತಿಯನ್ನು ನೀಡಲಾಗುವುದು. |
| | **2) ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ಥಳ ನಿಯುಕ್ತಿ:**<br>ಸದರಿ ಉಪಘಟಕದಡಿ ನಗರದ ನಿರುದ್ಯೋಗ ಯುವಕ/ಯುವತಿಯರಿಗೆ ವಿವಿಧ ಉದ್ಯೋಗಾಧಾರಿತ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ನೀಡಿ, ಪ್ರಾಮಾಣೀಕರಣ ಮತ್ತು ಮೌಲ್ಯಮಾಪನವನ್ನು ಕೈಗೊಂಡು, ಕೇಂದ್ರ ಸರ್ಕಾರದ ಪ್ರಮಾಣ ಪತ್ರವನ್ನು ನೀಡಿ, ತರಬೇತಿಯನ್ನು ಪಡೆದುಕೊಂಡ ಶೇ.70 ರಷ್ಟು ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಅಥವಾ ವೇತನಾಧಾರಿತ ಉದ್ಯೋಗವನ್ನು ಕಲ್ಪಿಸಲಾಗುವುದು. |

| | |
|---|---|
| | **<u>ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (NRLM)</u>**<br>ನಿರುದ್ಯೋಗಿ ಪದವೀಧರರಿಗೆ ಯಾವುದೇ ಪ್ರತ್ಯೇಕ ಸೌಲಭ್ಯಗಳು ಲಭ್ಯವಿರುವುದಿಲ್ಲ. ಆದರೆ, ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯಡಿ ಅನುಷ್ಠಾನಗೊಳಿಸುತಿರುವ ಈ ಕೆಳಗಿನ ಕಾರ್ಯಕ್ರಮಗಳಡಿ ಗ್ರಾಮೀಣ ಪ್ರದೇಶದ ನಿರುದ್ಯೋಗಿ ಪದವೀಧರರು ಸಹ ಅರ್ಜಿಗಳನ್ನು ಸಲ್ಲಿಸುವ ಮೂಲಕ ನಿಯಮಾನುಸಾರ ಸೌಲಭ್ಯ ಪಡೆಯಬಹುದಾಗಿದೆ.<br><br>1. **ದೀನ ದಯಾಳ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯ-ಡಿಡಿಯುಜಿಕೆವೈ:**<br>ಈ ಯೋಜನೆಯಡಿ ಬಡತನ ರೇಖೆಗಿಂತ ಕಡಿಮೆ ಇರುವ ಕುಟುಂಬದ 35 ವಯೋಮಾನದವರೆಗಿನ ಗ್ರಾಮೀಣ ಯುವಕ ಯುವತಿಯರಿಗೆ ಅವರುಗಳ ವಿದ್ಯಾರ್ಹತೆಗನುಗುಣವಾಗಿ ಕಂಪ್ಯೂಟರ್, ಹಾಸ್ಪಿಟಾಲಿಟಿ, ಡೇಟಾಎಂಟ್ರಿ, ಪ್ರವಾಸೋದ್ಯಮ, ಮೆಕಾನಿಕ್, ನರ್ಸಿಂಗ್, ಸೆಕ್ಯೂರಿಟಿ ಸರ್ವಿಸಸ್, ಟೈಲರಿಂಗ್ ಸೇರಿದಂತೆ ವಿವಿಧ 279 ಟ್ರೇಡ್‌ಗಳಲ್ಲಿ ಕನಿಷ್ಠ 3 ತಿಂಗಳುಗಳಿಂದ ಒಂದು ವರ್ಷದವರೆಗೆ ಉಚಿತ ವಸತಿಯೊಂದಿಗಿನ ಶ್ರೇಷ್ಠ ಗುಣಮಟ್ಟದ ಕೌಶಲ್ಯ ತರಬೇತಿ ನೀಡಿ ಕಡ್ಡಾಯವಾಗಿ ಉದ್ಯೋಗ ಒದಗಿಸುವ ಏಕೈಕ ಯೋಜನೆಯಾಗಿದೆ.<br><br>2. **ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ:**<br>ಸದರಿ ತರಬೇತಿಯ ಸಂಸ್ಥೆಯ ಮೂಲಕ 45 ವಯೋಮಾನದವರೆಗಿನ ಗ್ರಾಮೀಣ ನಿರುದ್ಯೋಗ ಯುವಕ/ಯುವತಿಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ತರಬೇತಿಯನ್ನು ನೀಡಲಾಗುತ್ತಿದೆ, ಸದರಿ ಕಾರ್ಯಕ್ರಮದಲ್ಲಿ 61 ಕೋರ್ಸ್‌ಗಳಡಿ ತರಬೇತಿ ಒದಗಿಸಿ ಸ್ವ-ಉದ್ಯೋಗ ಕೈಗೊಳ್ಳಬೇಕಾಗಿರುವ ಅಗತ್ಯ ಮಾಹಿತಿ, ಯೋಜನಾ ವರದಿ, ಮಾರ್ಕೆಟ್ ಆಯ್ಕೆ ಸಂಬಂಧಿಸಿದಂತೆ ಕೌಶಲ್ಯ ತರಬೇತಿಯನ್ನು ನೀಡಲಾಗುತ್ತಿದೆ. ತರಬೇತಿ ಸಂದರ್ಭದಲ್ಲಿ ಶೀಭಿರಾರ್ಥಿಗಳಿಗೆ ಸಮವಸ್ತ್ರ ಮತ್ತು ತರಬೇತಿ ಭತ್ಯೆ ನೀಡಲಾಗುತ್ತದೆ.<br>**<u>ಸಿಡಾಕ್</u>**<br>ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಸಂಸ್ಥೆಯ ಆಸಕ್ತ ನಿರುದ್ಯೋಗಿ ಯುವಕ/ಯುವತಿಯರಿಗೆ ಸ್ವಾವಲಂಬಿಗಳಾಗಲು ಉದ್ಯಮಶೀಲತಾಭಿವೃದ್ಧಿ ಉಚಿತ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. |
| (ಆ) ನಿರುದ್ಯೋಗಿ ಪದವೀಧರರು ಯಾವುದಾದರೂ ಉದ್ಯೋಗದಲ್ಲಿ ನಿರತರಾಗುವವರೆಗೆ ಅವರುಗಳಿಗೆ ನಿರುದ್ಯೋಗ ಭತ್ಯೆಯನ್ನು ನೀಡುವುದು ಸೂಕ್ತವಾಗಿರುವುದರಿಂದ ಸರ್ಕಾರವು ಯಾವ ರೀತಿಯ ಕ್ರಮ ವಹಿಸುವುದು? | ಈ ಇಲಾಖೆಯಡಿ ಎಲ್ಲಾ ಯುವಜನರಿಗೆ ಉಚಿತವಾಗಿ ಅಲ್ಪಾವಧಿ ತರಬೇತಿ ಕಾರ್ಯಕ್ರಮಗಳನ್ನು ನೀಡುತ್ತಿರುವುದರಿಂದ ಯಾವುದೇ ನಿರುದ್ಯೋಗ ಭತ್ಯೆಯನ್ನು ನೀಡಲಾಗುತ್ತಿಲ್ಲ. |

**ಸಂಖ್ಯೆ: ಕೌಉಜೀಇ 03 ಕೌಗುಪ್ರ 2022**

(ಡಾ॥ ಸಿ.ಎನ್. ಅಶ್ವಥ್‌ನಾರಾಯಣ)
**ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು**
**ತಂತ್ರಜ್ಞಾನ, ವಿದ್ಯುನ್ಮಾನ ಮತ್ತು**
**ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು**
**ಜೀವನೋಪಾಯ ಸಚಿವರು.**